ಓ ಎಸ್ ನಂ.231/2017
ಪಿ.ಡಬ್ಲ್ಯೂ ಃ 1

ದಿನಾಂಕಃ-30.01.2019 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.
ಮುಖ್ಯ ವಿಚಾರಣೆ ಃ ವಾದಿ ಪರ ವಕೀಲರಾದ ಶ್ರೀ. ಸಿಜಿಎಸ್ ರವರಿಂದ

ನಾನು ಈ ದಾವೆಯಲ್ಲಿ ವಾದಿ ಇದ್ದು, ನನ್ನ ಮುಖ್ಯ ವಿಚಾರಣೆಯ ಬದಲಾಗಿ ನಾನು ನನ್ನ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿರುವ ಎಲ್ಲಾ ವಿಷಯಗಳನ್ನು ನಾನು ನನ್ನ ವಕೀಲರಿಗೆ ಹೇಳಿ, ಬರೆಯಿಸಿ, ಓದಿಸಿ ತಿಳಿದುಕೊಂಡು ಮನಗೊಂಡ ನಂತರ ಸಹಿ ಮಾಡಿರುತ್ತೇನೆ. ನನ್ನ ಪ್ರಮಾಣ ಪತ್ರದಲ್ಲಿರುವ ಎಲ್ಲಾ ವಿಷಯಗಳು ನಿಜ ಮತ್ತು ಸತ್ಯಸಂಗತಿಗಳಾಗಿರುತ್ತವೆ.

ದಿನಾಂಕಃ-16.11.1966ರ ನೋಂದಾಯಿತ ಶುದ್ಧಕ್ರಯ ಪತ್ರದ ಮೂಲ ಪ್ರತಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ.1 ಎಂದು ಗುರುತಿಸಲಾಯಿತು. ಮ್ಯೂಟೇಷನ್ ರಿಜಿಸ್ಟರ್ ಎಕ್ಸ್ಟ್ರಾಕ್ಟ್ ಎಂ ಆರ್ ನಂ. ಟಿ24/2015-2016ರ ಪ್ರತಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ.2 ಎಂದು ಗುರುತಿಸಲಾಯಿತು. ಮ್ಯೂಟೇಷನ್ ರಿಜಿಸ್ಟರ್ ಎಕ್ಸ್ಟ್ರಾಕ್ಟ್ ಎಂ ಆರ್ ನಂ. 10/85-6ರ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ.3 ಎಂದು ಗುರುತಿಸಲಾಯಿತು. ದಾವಾ ಸ್ವತ್ತಿಗೆ ಸಂಬಂಧಿಸಿದಂತೆ 78-79 ರಿಂದ 79-81 ರವರೆಗಿನ ಒಂದು ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ.4 ಎಂದು ಗುರುತಿಸಲಾಯಿತು. ದಾವಾ ಸ್ವತ್ತಿಗೆ ಸಂಬಂಧಿಸಿದಂತೆ 82-83 ರಿಂದ 87-88 ರವರೆಗಿನ ಒಂದು ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ.5 ಎಂದು ಗುರುತಿಸಲಾಯಿತು. ದಾವಾ ಸ್ವತ್ತಿಗೆ ಸಂಬಂಧಿಸಿದಂತೆ 2011-2012ನೇ ಸಾಲಿನ ಒಂದು ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ.6 ಎಂದು ಗುರುತಿಸಲಾಯಿತು.

ದಾವಾ ಸ್ವತ್ತಿಗೆ ಸಂಬಂಧಿಸಿದಂತೆ 2012–2013ನೇ ಸಾಲಿನ ಒಂದು ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ.7 ಎಂದು ಗುರುತಿಸಲಾಯಿತು. ಸರ್ವೆ ನಂ.39/1 ಜಮೀನಿಗೆ ಸಂಬಂಧಿಸಿದಂತೆ 2016–2017ನೇ ಸಾಲಿನ ಒಂದು ಪಹಣಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ.8 ಎಂದು ಗುರುತಿಸಲಾಯಿತು. ತೆರಿಗೆ ಪಾವತಿಸಿದ ಕಂದಾಯ ರಸೀದಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ.9 ಎಂದು ಗುರುತಿಸಲಾಯಿತು. ಒಂದು ಪಟ್ಟಾ ಮತ್ತು ರಶೀತಿ ಪುಸ್ತಕವನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ.10 ಎಂದು ಗುರುತಿಸಲಾಯಿತು.

ಪಾಟೀ ಸವಾಲು ಃ ಪ್ರತಿವಾದಿಗಳ ಪರ ವಕೀಲರ ಕೋರಿಕೆಯ ಮೇರೆಗೆ ಸಮಯ ಕೋರಿದ್ದು ಆಲಿಸಿ ನೀಡಲಾಯಿತು.

ಓದಿ ಹೇಳಿ ಕೇಳಿ ಸರಿ ಇದೆ ಎಂದು ಒಪ್ಪಿ

ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ,
ಗುಬ್ಬಿ